ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 823 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:23-08-2018

**ಇವರಿಂದ:**

ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತಿಯ,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

**ವಿಷಯ:** ಕೊಡಗು ಜಿಲ್ಲೆಯ ಪ್ರವಾಹ ಸಂತ್ರಸ್ಥರಿಗೆ ಗ್ರಾಮ ಪಂಚಾಯತಿಗಳು ನೆರವು ನೀಡುವ ಬಗ್ಗೆ.

**ಉಲ್ಲೇಖ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ,......... ಮಂಡ್ಯ ರವರ ಪತ್ರ ದಿನಾಂಕ:21-08-2018.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ರವರ ಪತ್ರ ದಿನಾಂಕ:21-08-2018.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೊಡಗು ಜಿಲ್ಲೆಯಲ್ಲಿ ಇತ್ತೀಚಿಗೆ ಬಿದ್ದ ಭಾರಿ ಮಳೆಯಿಂದಾಗಿ ಪ್ರವಾಹ ಉಂಟಾಗಿ ಅಪಾರ ಪ್ರಮಾಣದ ಆಸ್ತಿಪಾಸ್ತಿಗಳಿಗೆ ನಷ್ಟ ಸಂಭವಿಸಿದ್ದು ಜನತೆ ಸಂಕಷ್ಟಕ್ಕೆ ಸಿಲುಕಿರುತ್ತಾರೆ. ಈ ಪ್ರವಾಹದಿಂದ ಸಂಕಷ್ಟಕ್ಕೆ ಸಿಲುಕಿರುವ ಜನರ ರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಪರಿಹಾರ ಕಾರ್ಯಕ್ಕೆ ಸಾರ್ವಜನಿಕರು ಮತ್ತು ಸಂಘ ಸಂಸ್ಥೆಗಳು ನೆರವು ನೀಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳು ತಮ್ಮ ವತಿಯಿಂದ ನೆರವು ನೀಡಲು ಮುಂದೆ ಬಂದಿರುತ್ತವೆ. ಈ ಸಂಬಂಧ ಉಲ್ಲೇಖಿತ ಪತ್ರಗಳಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮಂಡ್ಯ ಮತ್ತು ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ರವರು ಕೋರಿಕೆ ಸಲ್ಲಿಸಿ ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಪ್ರಸ್ತಾವನೆ ಪರಿಶೀಲಿಸಿದ್ದು ಇದೊಂದು ಉತ್ತಮವಾದ ಪ್ರಸ್ತಾವನೆಯಾಗಿರುತ್ತದೆ. ಅಪಾರ ಪ್ರಮಾಣದ ಮಳೆಯಿಂದಾಗಿ ಸಂಭವಿಸಿರುವ ಹಾನಿಗೆ ಒಳಗಾಗಿರುವ ಸಂತ್ರಸ್ಥರಿಗೆ ನೆರವಾಗಲು ಗ್ರಾಮ ಪಂಚಾಯಿತಿಗಳು ಸ್ವಂತ ಸಂಪನ್ಮೂಲದಿಂದ ತಮ್ಮ ಸಾಮರ್ಥ್ಯಾನುಸಾರ ಆರ್ಥಿಕ ನೆರವು ನೀಡಲು ಅನುಮತಿ ನೀಡಿದೆ. ಗ್ರಾಮ ಪಂಚಾಯಿತಿಗಳು ನೀಡುವ ನೆರವಿನ ಹಣವನ್ನು ಡಿ.ಡಿ. ಮೂಲಕ ಈ ಉದ್ದೇಶಕ್ಕಾಗಿ ತೆರೆದಿರುವ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಜಮಾ ಮಾಡಲು ತಿಳಿಸಿದೆ. ( **ಖಾತೆ ಹೆಸರು:** ಮುಖ್ಯ ಮಂತ್ರಿಗಳ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ-2018, ಖಾತೆ ನಂಬರ್:37887098605, **IFSC: SBIN0040277**, ಬ್ಯಾಂಕ್ ಶಾಖೆ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಧಾನ ಸೌಧ, ಬೆಂಗಳೂರು.)

ತಮ್ಮ ನಂಬುಗೆಯ,

23/8/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ: ಮಾಹಿತಿಗಾಗಿ:

1) ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ,
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು, ವಿಕಾಸ ಸೌಧ,
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ,
5) ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ,

ಪ್ರತಿ: ಅಗತ್ಯ ಕ್ರಮಕ್ಕಾಗಿ

6) ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
7) ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
8) ಸಂಪಾದಕರು, ಕರ್ನಾಟಕ ವಿಕಾಸ/ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.